ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 673
ಸದಸ್ಯರ ಹೆಸರು	: ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸ ಬೇಕಾದ ದಿನಾಂಕ	: 04.03.2021
ಉತ್ತರಿಸ ಬೇಕಾದ ಸಚಿವರು	: ಮಾನ್ಯ ಮುಖ್ಯಮಂತ್ರಿಗಳು

ಕ್ರ ಸಂ.	ಪ್ರಶ್ನೆ	ಉತ್ತರ
(ಅ)	ರಾಜ್ಯ ಸರ್ಕಾರಿ ನೌಕರರಿಗೆ ಯಾವಾಗಿನಿಂದ ತುಟ್ಟಿಭತ್ಯೆ (D.A.) ಯನ್ನು ತಡೆಹಿಡಿಯಲಾಗಿದೆಯೇ;	6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ, 2018ರ ಪರಿಷ್ಕೃತ ರಾಜ್ಯ ವೇತನ ಶ್ರೇಣಿಗಳಲ್ಲಿ ತುಟ್ಟಿಭತ್ಯೆಯನ್ನು ಮಂಜೂರು ಮಾಡುವಲ್ಲಿ, ಕೇಂದ್ರ ಸರ್ಕಾರದ ತುಟ್ಟಿಭತ್ಯೆ ದರಗಳೊಂದಿಗೆ ಹೋಲಿಸಿ, ಲೆಕ್ಕಹಾಕಿ ಮಂಜೂರು ಮಾಡಲಾಗುತ್ತದೆ. ಕೋವಿಡ್–19ರ ಸಂಕಷ್ಟದ ಕಾರಣ ಕೇಂದ್ರ ಸರ್ಕಾರವು ಕೇಂದ್ರ ಸರ್ಕಾರದ ನೌಕರರಿಗೆ ದಿನಾಂಕ: 01–01–2020ರಿಂದ ಜಾರಿಗೆ ಬರುವಂತೆ ತುಟ್ಟಿಭತ್ಯೆಯನ್ನು ಸ್ಥಗಿತಗೊಳಿಸಿ ಆದೇಶಿಸಿರುತ್ತದೆ. ಆದುದರಿಂದ, ರಾಜ್ಯ ಸರ್ಕಾರಿ ನೌಕರರಿಗೂ ಕೂಡ ದಿನಾಂಕ: 01–01–2020ರಿಂದ ಜಾರಿಗೆ ಬರುವಂತೆ ಲಭ್ಯವಿರುವ ತುಟ್ಟಿಭತ್ಯೆಯನ್ನು ಮುಂದಿನ ಆದೇಶದವರೆಗೆ ಸ್ಥಗಿತಗೊಳಿಸಲಾಗಿರುತ್ತದೆ.
(ಆ)	ಲಾಕ್‌ಡೌನ್ ಮುಗಿದು ಆರ್ಥಿಕ ಪರಿಸ್ಥಿತಿ ಸುಧಾರಿಸಿರುವುದರಿಂದ ತಡೆಹಿಡಿದಿರುವ ತುಟ್ಟಿಭತ್ಯೆ (D.A.) ಯನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?	
(ಇ)	ನೌಕರರಿಗೆ ಯಾವಾಗ ತುಟ್ಟಿಭತ್ಯೆ (D.A.) ಬಿಡುಗಡೆ ಮಾಡಲಾಗುವುದು? (ವಿವರ ನೀಡುವುದು.)	ಕೇಂದ್ರ ಸರ್ಕಾರವು ತನ್ನ ನೌಕರರಿಗೆ ತುಟ್ಟಿಭತ್ಯೆಗಳನ್ನು ಮಂಜೂರು ಮಾಡಿ ಆದೇಶ ಹೊರಡಿಸಿದ ನಂತರ ಅದನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಸಂ: ಆಇ 6 ಎಸ್‌ಆರ್‌ಪಿ 2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ.